4) ಗುಲ್ಬರ್ಗಾ ವಿಶ್ವವಿದ್ಯಾಲಯ – 1259 04
5) ಮಂಗಳೂರು ವಿಶ್ವವಿದ್ಯಾಲಯ – 1026 64
6) ಕನ್ನಡ ವಿಶ್ವವಿದ್ಯಾಲಯ – 348 80
7) ಕುವೆಂಪು ವಿಶ್ವವಿದ್ಯಾಲಯ – 1234 25

ಆ) ಮುಕ್ತ ವಿಶ್ವವಿದ್ಯಾಲಯ ಮೂಲತಃ Self financing ಮತ್ತು ಆರ್ಥಿಕವಾಗಿ ಸ್ವಾವಲಂಭಿ ವಿಶ್ವವಿದ್ಯಾಲಯವಾಗಬೇಕೆಂಬ ಉದ್ದೇಶದಿಂದ ಸ್ಥಾಪಿಸಲಾಗಿದೆ, ಆದಗ್ಯೂ ಯೋಜನಾ ಬಾಬ್ತಿನಲ್ಲಿ ಒದಗಿಸಲಾಗುತ್ತಿರುವ ಒಟ್ಟಾರೆ, ಅನುದಾನದಲ್ಲಿಯೇ ಸಿಬ್ಬಂದಿ ವೇತನಕ್ಕಾಗಿ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ ಬ್ಲಾಕ್ ಅನುದಾನ ನೀಡಿಕೆ ಬಗ್ಗೆ ಸ್ವೀಕೃತವಾದ ಪ್ರಸ್ತಾವನೆಯನ್ನು ಪರಿಶೀಲಿಸಲಾಗುತ್ತಿದೆ.

ಇ) ರೂ 3,43,08,504–00

ಈ) ಮುಕ್ತ ವಿಶ್ವವಿದ್ಯಾಲಯವು Self financing ಮತ್ತು ಆರ್ಥಿಕವಾಗಿ ಸ್ವಾವಲಂಭನೆ ವಿಶ್ವವಿದ್ಯಾಲಯವಾಗಬೇಕೆಂಬ ಉದ್ದೇಶವನ್ನಿಟ್ಟುಕೊಂಡು ಸ್ಥಾಪಿಸಲಾಗಿದೆ

516(503) ಶ್ರೀ ಹೆಚ್ ಎಸ್ ಶಂಕರಲಿಂಗೇಗೌಡ (ಚಾಮರಾಜ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ರಾಜ್ಯದ ಯಾವ ಯಾವ ಸಾಂಪ್ರದಾಯಿಕ ವಿಶ್ವವಿದ್ಯಾಲಯಗಳಲ್ಲಿ ಅಂಚೆ ಮೂಲಕ ಶಿಕ್ಷಣ ನೀಡಲಾಗುತ್ತಿದೆ, ಹಾಗೂ ಯಾವ ವರ್ಷಗಳಿಂದ

ಆ) ಈ ಉದ್ದೇಶದಿಂದ ತೆರೆದ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯವಿದ್ದರೂ ಸಾಂಪ್ರದಾಯಿಕ ವಿಶ್ವವಿದ್ಯಾಲಯಗಳಲ್ಲಿ ಅಂಚೆ ಮೂಲಕ ಶಿಕ್ಷಣ ನೀಡಲು ಅನುಮತಿ ನೀಡಲು ಕಾರಣವೇನು,

ಇ) ಸಾಂಪ್ರದಾಯಿಕ ವಿಶ್ವವಿದ್ಯಾಲಯಗಳಲ್ಲಿ ಅಂಚೆ ಮೂಲಕ ಶಿಕ್ಷಣ ನೀಡುವುದರಿಂದ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಅಸ್ತಿತ್ವಕ್ಕೆ ಧಕ್ಕೆ ಬಂದಂತಾಗಲಿಲ್ಲವೇ

ಈ) ಸಾಂಪ್ರದಾಯಿಕ ವಿಶ್ವವಿದ್ಯಾಲಯಗಳಲ್ಲಿ ಅಂಚೆ ಮೂಲಕ ಶಿಕ್ಷಣ ನೀಡುವುದಕ್ಕೆ ನೀಡಿರುವ ಅನುಮತಿ ಹಿಂತಿಗೆದುಕೊಳ್ಳುವ ಬಗ್ಗೆ ಸರ್ಕಾರದ ನಿಲುವೇನು?

ಶ್ರೀ ಡಿ ಮಂಜುನಾಥ (ಉನ್ನತ ಶಿಕ್ಷಣ ಸಚಿವರು)

ಅ) ಬೆಂಗಳೂರು ವಿಶ್ವವಿದ್ಯಾಲಯ – 1976ರಿಂದ

ಆ) 2000 ಕೆ ಎಸ್ ಯು ಅಧಿನಿಯಮದಲ್ಲಿ ಸಂಪ್ರದಾಯಿಕ ವಿಶ್ವವಿದ್ಯಾಲಯಗಳಲ್ಲಿಯೂ ಸಹ ಅಂಚೆ ಮತ್ತು ತೆರಪಿನ ಶಿಕ್ಷಣ ಮತ್ತು ದೂರ ಶಿಕ್ಷಣ ಸಂವೇದಿ ಮೂಲಕ ಶಿಕ್ಷಣ ಕಲಿಸಲು ಅವಕಾಶ ಕಲ್ಪಿಸಲಾಗಿದೆ

ಇ) ಇಲ್ಲ

ಈ) ಇಲ್ಲ

517(504) ಶ್ರೀ ಶಂಕರಲಿಂಗೇಗೌಡ ಹೆಚ್ ಎಸ್ (ಚಾಮರಾಜ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಮೈಸೂರಿನ ಕುವೆಂಪು ನಗರದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಲೇಜು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಕಟ್ಟಡದಲ್ಲಿ ನಡೆಯುತ್ತಿದ್ದು, ಸದರಿ ಕಟ್ಟಡವನ್ನು ಕಾಲೇಜಿಗೆ ಪಡೆಯಲು ಯಾವ ಕ್ರಮ ಕೈಗೊಳ್ಳಲಾಗಿದೆ